ಚೇರ್ಮನ್.— ಪ್ರಸ್ತಾವ ಏನೆಂದರೆ "೧೯೯೦ನೇ ಇಸವಿಯ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆ ಮೇಲೆ ತೆರಿಗೆ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ–೨

ಚೇರ್ಮನ್.—ಪ್ರಸ್ತಾವ ಏನೆಂದರೆ "೨ನೇ ಖಂಡವು ಈ ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಹಾಗೂ ಖಂಡ ೨ ಅನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು

ಖಂಡ–೧ ಇತ್ಯಾದಿ

ಚೇರ್ಮನ್.— ಪ್ರಸ್ತಾವ ಏನೆಂದರೆ ' ಮೊದಲನೇ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವವನ್ನು ಅಂಗೀಕರಿಸಲಾಯಿತು

ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು

ಪ್ರಸ್ತಾವದ ಅಂಗೀಕಾರ

ಶ್ರೀ ಜಿ. ವುಟ್ಟಸ್ವಾಮಿ ಗೌಡ (ನೀರಾವರಿ ಮತ್ತು ಲೋಕೋಪಯೋಗಿ ಸಚಿವರು).—೧೯೯೦ನೇ ಇಸವಿಯ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆ ಮೇಲೆ ತೆರಿಗೆ) (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸಬೇಕೆಂದು ಕೋರುತ್ತೇನೆ.

ಚೇರ್ಮನ್.—ಪ್ರಸ್ತಾವ ಏನೆಂದರೆ ೧೯೯೦ನೇ ಇಸವಿಯ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆ ಮೇಲಿನ ತೆರಿಗೆ) (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು "

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

೧೯೯೦ನೇ ಇಸವಿಯ ಕರ್ನಾಟಕ ರಾಜ್ಯದ ಹಣ ವಿನಿಯೋಗಕ್ಕೆ ಸಂಬಂಧಿಸಿದ (ಲೇಖಾನುದಾನ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ. ವೀರಪ್ಪ ಮೊಯ್ಲಿ (ಕಾನೂನು, ಯೋಜನೆ ಮತ್ತು ವಾರ್ತಾ ಸಚಿವರು).—ಸನ್ಮಾನ್ಯ ಅಧ್ಯಕ್ಷರೇ, ಮಾನ್ಯ ಹಣಕಾಸಿನ ಸಚಿವರ ಪರವಾಗಿ ೧೯೯೦ನೇ ಇಸವಿಯ ಕರ್ನಾಟಕ ರಾಜ್ಯದ ಹಣ ವಿನಿಯೋಗಕ್ಕೆ ಸಂಬಂಧಿಸಿದ (ಲೇಖಾನುದಾನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಛೇರ್ಮನ್.— ಪ್ರಸ್ತಾವ ಏನೆಂದರೆ "೧೯೯೦ನೇ ಇಸವಿಯ ಕರ್ನಾಟಕ ರಾಜ್ಯದ ಹಣ ವಿನಿಯೋಗಕ್ಕೆ ಸಂಬಂಧಿಸಿದ (ಲೇಖಾನುದಾನ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ. ವೀರಪ್ಪ ಮೊಯ್ಲಿ (ಕಾನೂನು ಮತ್ತು ಸಂಸದೀಯ ಸಚಿವರು).—ಮಾನ್ಯ ಅಧ್ಯಕ್ಷರೇ ೧೯೯೦ನೇ ಇಸವಿಯ ಕರ್ನಾಟಕ ರಾಜ್ಯದ ಹಣ ವಿನಿಯೋಗಕ್ಕೆ ಸಂಬಂಧಿಸಿದ (ಲೇಖಾನುದಾನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಛೇರ್ಮನ್.— ವಿಧೇಯಕವನ್ನು ಮಂಡಿಸಲಾಗಿದೆ *

---

* Annexure